ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಲೆಕ್ಕ ಅಧೀಕ್ಷಕರ ವೇತನ ತಾರತಮ್ಯ ಕುರಿತು

ಡಾ: ಚಂದ್ರುಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ):-

627(730) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ವಿಭಾಗದ ಶಿಕ್ಷಣ ಆಯುಕ್ತಾಲಯದಲ್ಲಿ ಲೆಕ್ಕ ಅಧೀಕ್ಷಕರ ಹುದ್ದೆಗೆ ಬಡ್ತಿ ನೀಡುವಾಗ ವೇತನ ಶ್ರೇಣಿಯಲ್ಲಿ ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ತಾರತಾಮ್ಯ ಸರಿಪಡಿಸಲಾಗುವುದು;

(ಆ) ಸದರಿ ವೇತನ ತಾರತಮ್ಯವನ್ನು ಸರಿಪಡಿಸಲು ಸರ್ಕಾರಕ್ಕೆ ಕಲಬುರಗಿ ಶಿಕ್ಷಣ ಆಯುಕ್ತಾಲಯದವರು ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆಯೇ; ಸಲ್ಲಿಸಿದ್ದಲ್ಲಿ, ಯಾವ ದಿನಾಂಕದಂದು ಸಲ್ಲಿಸಿದ್ದಾರೆ; ಸರ್ಕಾರದಲ್ಲಿ ಯಾವ ಯಾವ ಅಧಿಕಾರಿಗಳು /ಸಿಬ್ಬಂದಿಗಳು ವಿಳಂಬ ಮಾಡಿದ್ದಾರೆ; ವಿಳಂಬಕ್ಕೆ ಕಾರಣವೇನು; ವಿಳಂಬ ಮಾಡಿದ ಅಧಿಕಾರಿಗಳ/ಸಿಬ್ಬಂದಿಗಳ ಮೇಲೆ ಸರ್ಕಾರ ತೆಗೆದುಕೊಂಡ ಶಿಸ್ತು ಕ್ರಮವೇನು ? (ವಿವರ ನೀಡುವುದು)